**ಕರ್ನಾಟಕ ವಿಧಾನ ಪರಿಷತ್ತು**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 71
2. ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ( ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 11.08.2025
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ರಾಜ್ಯದ ಹಾಗೂ ಹೊರ ರಾಜ್ಯಗಳ ಜನರಲ್ಲಿ ಹರಡಿರುವ ಮಾರಣಾಂತಿಕ ಕಾಯಿಲೆಯಾದ ಕ್ಯಾನ್ಸರ್ ಪೀಡಿತ ಜನರ ಆರೈಕೆಗಾಗಿ/ರೋಗಗಳನ್ನು ಗುಣಪಡಿಸಲು ಹಾಗೂ ಸಂಶೋಧನೆಗೆ ಇರುವ ಕಿದ್ವಾಯಿ ಆಸ್ಪತ್ರೆಯಲ್ಲಿ ಎಷ್ಟು MRI (Magnetic Resonance Imaging) ಯಂತ್ರಗಳಿವೆ; | ಕಿದ್ವಾಯಿ ಆಸ್ಪತ್ರೆಯಲ್ಲಿ ಮಾರಣಾಂತಿಕ ಖಾಯಿಲೆಯಾದ ಕ್ಯಾನ್ಸರ್ ಪೀಡಿತ ಜನರ ಆರೈಕೆಗಾಗಿ/ರೋಗಗಳನ್ನು ಗುಣಪಡಿಸಲು ಒಂದು MRI (Magnetic Resonance Imaging) ಯಂತ್ರ ಕಾರ್ಯನಿರ್ವಹಿಸುತ್ತಿದೆ. |
| (ಆ) | ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಎಷ್ಟು MRI (Magnetic Resonance Imaging) ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು) | ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ MRI ಯಂತ್ರಗಳ ವಿವರಗಳನ್ನು **ಅನುಬಂಧ-1**ರಲ್ಲಿ ಒದಗಿಸಲಾಗಿದೆ. |
| (ಇ) | ರಾಜ್ಯದ ಬಡ ಜನರ ಆಶಾಕಿರಣವಾದ ಬೆಂಗಳೂರು ಕಿದ್ವಾಯಿ ಆಸ್ಪತ್ರೆಯಲ್ಲಿನ ಯಂತ್ರ ಹಲವು ದಿನಗಳಿಂದ ಕಾರ್ಯನಿರ್ವಹಿಸದೆ ದುರಸ್ತಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ MRI ಯಂತ್ರದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿದ್ದು, ಕೂಡಲೇ ತಾಂತ್ರಿಕ ಬಿಡಿಭಾಗವನ್ನು ಆಮದು ಮಾಡಿಕೊಂಡು ಅಳವಡಿಸಲಾಗಿದೆ. ದಿ:19.07.2025 ರಿಂದ MRI ಯಂತ್ರ ಕಾರ್ಯನಿರ್ವಹಿಸುತ್ತಿದೆ. ಆದಾಗ್ಯೂ ಯಂತ್ರ ದುರಸ್ಥಿಯಲ್ಲಿರುವಾಗ ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ನಿಮ್ಹಾನ್ಸ್ ಮತ್ತು ಸಂಜಯ್ ಗಾಂಧಿ ಆಸ್ಪತ್ರೆಯಲ್ಲಿ MRI ನಡೆಸಲು ಪರ್ಯಾಯ ವ್ಯವಸ್ಥೆ ಮಾಡಲಾಗಿತ್ತು.<br><br>ರೋಗಿಗಳ ಚಿಕಿತ್ಸೆಗೆ ಅನುಗುಣವಾಗಿ ವೈದ್ಯಕೀಯ ಸೌಲಭ್ಯ ಕಲ್ಪಿಸಲು ಮತ್ತೊಂದು ಹೊಸ ಯಂತ್ರ ಖರೀದಿಗಾಗಿ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. |
| (ಈ) | ಬಂದಿದ್ದರೆ, ಅದನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; | |
| (ಉ) | ಕಿದ್ವಾಯಿ ಆಸ್ಪತ್ರೆಯ ಆಡಳಿತಾಧಿಕಾರಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ | ಸರ್ಕಾರದ ಆದೇಶ ಸಂ:e-DPAR 70 SAS 2024, ದಿ:24.07.2025ರಲ್ಲಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಐ.ಎ.ಎಸ್., ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ ಇವರನ್ನು |

| | | |
|---|---|---|
| | ಈ ಎರಡು ಹುದ್ದೆಗಳಲ್ಲಿ ಒಬ್ಬರೆ ಅಧಿಕಾರಿ ಕರ್ತವ್ಯ ನಿರ್ವಹಿಸುತ್ತಿದ್ದು, ಇದು ಆಡಳಿತದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿರುವುದರಿಂದ ಪ್ರತಿಷ್ಠಿತ ಆಸ್ಪತ್ರೆಯ ಆಡಳಿತಾಧಿಕಾರಿಯಾಗಿ ಶೀಘ್ರ ನೇಮಕ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಕಿದ್ವಾಯಿ ಸಂಸ್ಥೆಯ ಆಡಳಿತಾಧಿಕಾರಿ ಹುದ್ದೆಗೆ ನೇಮಿಸಿ ಆದೇಶಿಸಲಾಗಿದ್ದು, ಸದರಿಯವರು ದಿ:25.07.2025ರಂದು ಕಿದ್ವಾಯಿ ಸಂಸ್ಥೆಯ ಆಡಳಿತಾಧಿಕಾರಿ ಹುದ್ದೆಗೆ ವರದಿ ಮಾಡಿಕೊಂಡಿರುತ್ತಾರೆ. |

**ಸಂಖ್ಯೆ:** ಎಂಇಡಿ 131 ಕೆಯುಎಂ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.

**ಅನುಬಂಧ-1**

| ಶ್ರೀ ಬಸನಗೌಡ ಬಾದರ್ಲಿ ಇವರ ಪ್ರಶ್ನೆ ಸಂಖ್ಯೆ: 71(13) ಕ್ಕೆ ಸಂಬಂಧಿಸಿದಂತೆ | | |
|---|---|---|
| ಕ್ರ.ಸಂ | ಸಂಸ್ಥೆಯ ಹೆಸರು | MRI ಉಪಕರಣಗಳ ಸಂಖ್ಯೆ |
| 1 | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | 2 |
| 2 | ಮೈಸೂರು, ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಮೈಸೂರು | 1 |
| 3 | ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಹುಬ್ಬಳ್ಳಿ | 1 |
| 4 | ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬಳ್ಳಾರಿ. | 1 |
| 5 | ಬೀದರ್ ವೈದ್ಯಕೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ | 1 |
| 6 | ರಾಯಚೂರು ವೈದ್ಯಕೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು | 1 |
| 7 | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ. | 1 |
| 8 | ಶಿವಮೊಗ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ. | 1 |
| 9 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | 1 |
| 10 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 1 |
| 11 | ಚಾಮರಾಜನಗರ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | 1 |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು | 1 |
| 13 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಲಬುರಗಿ | 1 |
| 14 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ | 1 |
| 15 | ಕೆ.ಹೆಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ | 1 |
| 16 | ಚಿತ್ರದುರ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿತ್ರದುರ್ಗ | 1 |
| 17 | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು | 1 |
| 18 | ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ, ಧಾರವಾಡ | 1 |
| 19 | ಸಂಜಯ್‌ಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆ, ಬೆಂಗಳೂರು | 1 |
| ಒಟ್ಟು | | 20 |